ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	671
ಸದಸ್ಯರ ಹೆಸರು	:	ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	17-09-2021.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯ ಸರ್ಕಾರದಿಂದ ಕೋವಿಡ್-19 ವೆಚ್ಚಗಳಿಗಾಗಿ ಗ್ರಾಮ ಪಂಚಾಯಿತಿಗಳಿಗೆ ಘೋಷಿಸಲಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಾಕಿಯಿರುವ ಅನುದಾನವೆಷ್ಟು ಬಾಕಿ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು;	ಕಂದಾಯ ಇಲಾಖೆಯ ಆದೇಶ ಸಂಖ್ಯೆ: ಕಂಇ 193 ಟಿಎನ್‌ಆರ್ 2021, ದಿನಾಂಕ:07.06.2021 ರಲ್ಲಿ ಕೊವೀಡ್-19 ಸಾಂಕ್ರಾಮಿಕ ಸೋಂಕು ಗ್ರಾಮೀಣ ಪ್ರದೇಶಗಳಲ್ಲಿ ವ್ಯಾಪಕವಾಗಿ ಹರಡುವುದನ್ನು ತಡೆಗಟ್ಟಲು ಗ್ರಾಮಗಳಲ್ಲಿ ಹೋಂ ಐಸೋಲೇಷನ್‌ನಲ್ಲಿ ಇರುವವರಿಗೆ ಗ್ರಾಮ ಪಂಚಾಯಿತಿ ವತಿಯಿಂದ ಮಾಸ್ಕ್‌ಗಳು, ಸ್ಯಾನಿಟೈಸರ್‌ಗಳು, ಔಷಧಿಗಳು ಮತ್ತು ಇನ್ನಿತರೆ ಪರಿಕರಗಳನ್ನು ಒಳಗೊಂಡ ಕೊವೀಡ್ ಕಿಟ್‌ಗಳನ್ನು ನೀಡಲು ಮತ್ತು ಊಟ, ಹಾಸಿಗೆ, ಸ್ವಚ್ಛತಾ ಸಿಬ್ಬಂದಿ ಇನ್ನಿತರೆ ಕೆಲಸ ಕಾರ್ಯಗಳಿಗೆ ಬಳಕೆ ಮಾಡಲು ಪ್ರತಿ ಗ್ರಾಮ ಪಂಚಾಯಿತಿಗೆ ರೂ. 50,000/-ಗಳನ್ನು ರಾಜ್ಯ ವಿಪತ್ತು ಪರಿಹಾರ ನಿಧಿಯಡಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದ್ದು, ಜಿಲ್ಲಾಧಿಕಾರಿಗಳು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮರು ಬಿಡುಗಡೆ ಮಾಡಲು ಆದೇಶಿಸಲಾಗಿದೆ.
(ಆ)	ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ನೇಮಕಾತಿಗೆ ಹೊಸದಾಗಿ ರಚಿತವಾದ ನಿಯಮಾವಳಿಗಳ ವಿಕೇಂದ್ರೀಕರಣಕ್ಕೆ ವ್ಯತಿರಿಕ್ತವಾಗಿರುವುದನ್ನು ಗಮನಿಸಲಾಗಿದೆಯೇ; ಇದರಿಂದ ಗ್ರಾಮ ಪಂಚಾಯಿತಿ ಹಕ್ಕಿಗೆ ಚ್ಯುತಿಯಾದಂತಾಗುವುದಿಲ್ಲವೇ; ಈ ನಿಯಮಾವಳಿಯಿಂದ ಗ್ರಾಮ ಪಂಚಾಯಿತಿಗಳು ಶಾಸನಬದ್ಧ ಕಾರ್ಯನಿರ್ವಹಿಸಲು ಕೂಡಾ ಸಿಬ್ಬಂದಿ ಕೊರತೆಯನ್ನು ಅನುಭವಿಸುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು;	ಗ್ರಾಮ ಪಂಚಾಯತಿ ನೌಕರರನ್ನು ಜಿಲ್ಲಾ ಮಟ್ಟದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿನ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯಲ್ಲಿ ಆಯ್ಕೆ ಮಾಡುವುದರಿಂದ ಸಾಮಾಜಿಕವಾಗಿ ಎಲ್ಲಾ ವರ್ಗದವರಿಗೆ ಅವಕಾಶ ದೊರೆಯುವುದರಿಂದ ಜಿಲ್ಲೆಯನ್ನು ರೋಷ್ಟರ್‌ಗಾಗಿ ಒಂದು ಯೂನಿಟ್ ಎಂದು ಪರಿಗಣಿಸಿ ರಾಜ್ಯ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸಿರುವ ಮಾರ್ಗಸೂಚಿಗಳನುಸಾರ ನೇರ ನೇಮಕಾತಿ ಕೋಟಾದ ಮೀಸಲಾತಿಯನ್ನು ಅನುಸರಿಸಲು ಅವಕಾಶ ಕಲ್ಪಿಸಲಾಗಿದೆ. ಈ ಸಂಬಂಧ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದ್ದು, ಗ್ರಾಮ ಪಂಚಾಯಿತಿಯು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರವಾಗಿರುತ್ತದೆ.

(ಇ)	ಉಡುಪಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು; ಸಂಗ್ರಹಿಸಲಾದ ಅರ್ಜಿ ಶುಲ್ಕವೆಷ್ಟು; ಆಯ್ಕೆ ಪ್ರಕ್ರಿಯೆ ಯಾವ ಹಂತದಲ್ಲಿದೆ; ನೇಮಕಾತಿ ಪ್ರಕ್ರಿಯೆ ನಡೆಸಲಾಗುವುದೇ ಅಥವಾ ಅರ್ಜಿ ಶುಲ್ಕ ಹಿಂತಿರುಗಿಸಲಾಗುವುದೇ? (ತಾಲ್ಲೂಕುವಾರು ಗ್ರಾಮವಾರು ಮಾಹಿತಿಯನ್ನು ಒದಗಿಸುವುದು)	ಉಡುಪಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಸ್ವೀಕರಿಸಲಾದ ಅರ್ಜಿಗಳ ಸಂಖ್ಯೆ ಮತ್ತು ಸಂಗ್ರಹಿಸಲಾದ ಅರ್ಜಿ ಶುಲ್ಕದ ವಿವರವನ್ನು ಅನುಬಂಧ-1 ರಲ್ಲಿ ನೀಡಿದೆ. ಅರ್ಜಿ ಶುಲ್ಕವನ್ನು ಹಿಂದಿರುಗಿಸಿರುವುದಿಲ್ಲ. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಪ್ರತಿ ಗ್ರಾಮ ಪಂಚಾಯತಿಯ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾದ ಸರ್ಕಾರಿ ಆದೇಶದಲ್ಲಿ ಒದಗಿಸುವುದಾಗಿ ತಿಳಿಸಿದ್ದು, ಅದರಂತೆ ಹುದ್ದೆಗಳ ಸಂಖ್ಯೆಯನ್ನು ಗುರುತಿಸಿದ ನಂತರ ಗ್ರಾಮ ಪಂಚಾಯತಿಗಳಲ್ಲಿನ ಕಾರ್ಯದ ಒತ್ತಡ ಆಧರಿಸಿ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುವುದು.

ಸಂ. ಗ್ರಾಅಪ 330 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.